ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 21–12–2020

# ಮಾಧ್ಯಮ ಆಮಂತ್ರಣ

**1) Launching of Pilot Project on Integration of Fruits (Farmers Registration and Unified Beneficiary Information System) Portal with Banks**

**Inauguration:**

**Shri Rajeev Chawla, IAS Additional Chief Secretary, Government of Karnataka**

**A Manimekhalai, ED, Canara Bank**

**Niraj Kumar Verma ,CGM, NABARD**

**Date : 22-12-2020 Tuesday Time : 3-00 P.M.**

**Venue : Nabard Karnataka REgional Office, Bengaluru**

**RSVP : 9880568229**

# ಪತ್ರಿಕಾ ಪ್ರಕಟಣೆ

## ಮೆಗಾ ಲೋಕ್ ಅದಾಲತ್ ಒಟ್ಟು 2,63,186 ಪ್ರಕರಣಗಳು ಇತ್ಯರ್ಥ

ಬೆಂಗಳೂರು, ಡಿಸೆಂಬರ್ 21 (ಕರ್ನಾಟಕ ವಾರ್ತೆ):

ಡಿಸೆಂಬರ್ 19 ರಂದು ಹಮ್ಮಿಕೊಳ್ಳಲಾಗಿದ್ದ "ಮೆಗಾ ಲೋಕ್ ಅದಾಲತ್" ನಲ್ಲಿ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲು ಗುರುತಿಸಲಾಗಿದ್ದ ಪ್ರಕರಣಗಳ ಪೈಕಿ 16,315 ವ್ಯಾಜ್ಯ ಪೂರ್ವ ಪ್ರಕರಣಗಳು, 2,46,871 ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು ಒಟ್ಟು 2,63,186 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿರುತ್ತದೆ ಎಂದು ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯ ನಿರ್ವಾಹಕ ಅಧ್ಯಕ್ಷರಾದ ಅರವಿಂದ ಕುಮಾರ್ ತಿಳಿಸಿದರು.

ಇಂದು "ಮೆಗಾ ಲೋಕ್ ಅದಾಲತ್" ಕುರಿತು ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತಾನಾಡಿದ ಅವರು ಕರ್ನಾಟಕ ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 42, 803 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಹಾಗೂ 4,20,394 ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಒಟ್ಟು 4,63.197 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲು ಗುರುತಿಸಲಾಗಿತ್ತು ಎಂದು ಹೇಳಿದರು.

ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ 8 ಲೋಕ್ ಅದಾಲತ್ ಬೈಠಕ್‌ಗಳನ್ನು ಧಾರವಾಡ ಮತ್ತು ಕಲಬುರಗಿ ಪೀಠಗಳಲ್ಲಿ ತಲಾ 5 ಲೋಕ್ ಅದಾಲತ್ ಬೈಠಕ್‌ಗಳನ್ನು ಹಾಗೂ ಕರ್ನಾಟಕದ ಎಲ್ಲಾ ನ್ಯಾಯಾಲಯಗಳಲ್ಲಿ 938 ಲೋಕ್ ಅದಾಲತ್ ಬೈಠಕ್‌ಗಳನ್ನು ನಡೆಸಲಾಗಿತ್ತು.

ಲೋಕ್ ಅದಾಲತ್‌ನಲ್ಲಿ ರಾಜಿಯಾದ ಪ್ರಕರಣಗಳಿಂದ ಸಂಗ್ರಹಿಸಲಾದ ಸುಮಾರು 41,45,37,010 ಮೊತ್ತವನ್ನು ಸರ್ಕಾರದ ಖಾತೆಗೆ ಜಮಾ ಮಾಡಲಾಗಿರುತ್ತದೆ.

ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯ ನಿರ್ವಾಹಕ ಅಧ್ಯಕ್ಷರಾದ ಅರವಿಂದ ಕುಮಾರ್ ಅವರ ನಿರ್ದೇಶನದಂತೆ ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ನಿರ್ದಿಷ್ಟ ವಿಷಯಗಳಿಗೆ ಸಂಬಂಧಿಸಿದಂತೆ, ಉದಾಹರಣೆಗೆ ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣ ಪ್ರಕರಣಗಳು, ಹಣಕಾಸು ಸಂಸ್ಥೆಗಳಿಗೆ ಸಂಬಂಧಿಸಿದ ಪ್ರಕರಣಗಳು, ನೆಗೋಷಿಯಬಲ್ ಇನ್‌ಸ್ಟ್ರೂಮೆಂಟ್ಸ್ ಅಧಿನಿಯಮ ಪ್ರಕರಣಗಳೂ ಸೇರಿದಂತೆ ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಕೌಟುಂಬಿಕ ನ್ಯಾಯಾಲಯಗಳ (ವಿವಾಹ ವಿಚ್ಛೇದನ ಪ್ರಕರಣಗಳನ್ನು ಹೊರತುಪಡಿಸಿ) ಪ್ರಕರಣಗಳು ಮತ್ತಿತರ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜ್ಯದಾದ್ಯಂತ ದಿನಾಂಕ 19-12-2020 ರಂದು "ಮೆಗಾ ಲೋಕ್ ಅದಾಲತ್" ನ್ನು ಆಯೋಜಿಸಲಾಗಿತ್ತು.

ಭಾರತದಲ್ಲಿ ಕಾನೂನು ಸೇವೆಗಳ ಪ್ರಾಧಿಕಾರಗಳ "ಧ್ಯೇಯೋದ್ದೇಶ ಸರ್ವರಿಗೂ ನ್ಯಾಯ" ಎಂಬುದಾಗಿದೆ. ಸಮಾಜದ ದುರ್ಬಲ ವರ್ಗಗಳು ಜನರಿಗೆ ಉಚಿತ ಹಾಗೂ ಸಕ್ಷಮ ಕಾನೂನು ಸೇವೆಗಳನ್ನು ಒದಗಿಸುವುದರ ಮೂಲಕ, ನಾಗರೀಕರಿಗೆ ಅವರ ಆರ್ಥಿಕ ಮತ್ತಿತರ ದೌರ್ಬಲ್ಯಗಳ ಕಾರಣಕ್ಕಾಗಿ ನ್ಯಾಯವನ್ನು ನಿರಾಕರಿಸುವಂತಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳುವ ಅರ್ಥಪೂರ್ಣ ಹಾಗೂ ಮತ್ತರ ಉದ್ದೇಶದಿಂದ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿತು. ಈ ಮಹತ್ತರ ಉದ್ದೇಶವನ್ನು ಸಾಧಿಸಲು ಇರುವ ಮುಖ್ಯ ಮಾರ್ಗಗಳಲ್ಲಿ ಜನತಾ ನ್ಯಾಯಾಲಯಗಳನ್ನು ರಚಿಸುವುದೂ ಒಂದು. ಜನತಾ ನ್ಯಾಯಾಲಯಗಳನ್ನು ರಚಿಸಿ ತನ್ಮೂಲಕ ಭಾರತದ ನ್ಯಾಯಾಂಗ ವ್ಯವಸ್ಥೆಯು ನ್ಯಾಯ ನಿರ್ವಹಣೆಯನ್ನು "ಎಲ್ಲರಿಗೂ ಸಮಾನ ಅವಕಾಶ"

ಎಂಬ ತತ್ವದ ಆಧಾರದ ಮೇಲೆ ಮಾಡುತ್ತಿದೆಯೆಂಬ ಅಂಶವನ್ನು ಒತ್ತಿ ಹೇಳುತ್ತಿದೆ. ಇದು ಭಾರತದಂತಹ ದೇಶದಲ್ಲಿ ಅತ್ಯಂತ ಮಹತ್ವಪೂರ್ಣವಾದ ಹೆಜ್ಜೆಯಾಗಿದೆ.

ಜಾತಿ, ಧರ್ಮ, ವರ್ಗ ಅಥವಾ ಆರ್ಥಿಕ ಸ್ಥಿತಿ ಏನೇ ಆಗಿದ್ದರೂ "ಸಮಾನ ಅವಕಾಶ" ಎಂಬುದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಮಂತ್ರವಾಗಿದ್ದು, ಜನತಾ ನ್ಯಾಯಾಲಯಗಳು ವಿವಾಧಗಳನ್ನು /ಪ್ರಕರಣಗಳನ್ನು ಅಂತಿಮತೆಯ ಭಾವನೆಯೊಂದಿಗೆ ಮತ್ತು ವಿವಾಧಗಳನ್ನು ಹೊಂದಿರುವ ಪಕ್ಷಗಾರರ ತೃಪ್ತಿಗಾಗಿ ಇತ್ಯರ್ಥಗೊಳಿಸುವಲ್ಲಿ ಬಹುಮುಖ್ಯ ಪಾತ್ರ ವಹಿಸುತ್ತವೆ.

ಕಳೆದ ಐದಾರು ವರ್ಷಗಳಿಂದ "ಜನತಾ ನ್ಯಾಯಾಲಯ" ಚಳುವಳಿಯು ಹೆಚ್ಚು ಹೆಚ್ಚು ಜನಪ್ರಿಯವಾಗುತ್ತಿದ್ದು, ಇತ್ಯರ್ಥಗೊಳಿಸಲ್ಪಡುವ ಪ್ರಕರಣಗಳ ಸಂಖ್ಯೆಯಲ್ಲಿ ಬಹುದೊಡ್ಡ ಹೆಚ್ಚಳ ಕಂಡುಬಂದಿದೆ. ಇದರಿಂದಾಗಿ ವಿವಿಧ ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ ಪ್ರಕರಣಗಳ ಹೆಚ್ಚಳ ಕಡಿಮೆಯಾಗುತ್ತಿದೆ. ನ್ಯಾಯಾಲಯಗಳ ಸಮಯ ನಿಜಕ್ಕೂ ಅತ್ಯಮೂಲ್ಯವಾಗಿದ್ದು, ಕಷ್ಟವಿಲ್ಲದ ಪ್ರಕರಣಗಳನ್ನು ಜನತಾ ನ್ಯಾಯಾಲಯದ ಮೂಲಕ ಶೀಘ್ರ ವಿಲೇವಾರಿ ಮಾಡಬಹುದಾಗಿದೆ.

ಕೋವಿಡ್ –19 ಎಂಬ ಮಹಾ ಸಾಂಕ್ರಾಮಿಕ ರೋಗವು ಸರ್ವವ್ಯಾಪಿಯಾಗುತ್ತಿರುವ ಈ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಅಪಾರ ಸಂಖ್ಯೆಯಲ್ಲಿ ಜನ ಗುಂಪು ಸೇರುವುದನ್ನು ತಪ್ಪಿಸುವುದು ಮತ್ತು ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ದಿನನಿತ್ಯದ ಅತ್ಯಗತ್ಯವಾದ ಪರಿಪಾಠವಾಗಿಬಿಟ್ಟಿದೆ. ನ್ಯಾಯಾಲಯಗಳು ಮತ್ತು ಜನತಾ ನ್ಯಾಯಾಲಯಗಳು ಇದಕ್ಕೆ ಅಪವಾದವಲ್ಲ. ಇಲ್ಲಿಯವರೆಗೆ ಜನತಾ ನ್ಯಾಯಾಲಯಗಳೆಂದರೆ ಸಾಮಾನ್ಯವಾಗಿ ಎರಡು ತಿಂಗಳುಗಳಿಗೊಮ್ಮೆ ಮೆಗಾ ಲೋಕ್ ಅದಾಲತ್‌ನಲ್ಲಿ ನೂರಾರು ಪ್ರಕರಣಗಳನ್ನು ಕೈಗೆತ್ತಿಕೊಂಡು ಇತ್ಯರ್ಥಗೊಳಿಸಲಾಗುತ್ತಿದ್ದು, ಇದರಿಂದಾಗಿ ದೊಡ್ಡ ಸಂಖ್ಯೆಯಲ್ಲಿ ಕಕ್ಷಿಕಾರರು, ಸಾರ್ವಜನಿಕರು ಹಾಗೂ ನ್ಯಾಯವಾಧಿಗಳು ನೆರೆಯುವುದು ಸರ್ವೆಸಾಮಾನ್ಯವಾಗಿರುತ್ತಿತ್ತು. ಈಗ ಕೋವಿಡ್ –19 ರಿಂದಾಗಿ ಜನರು ಗುಂಪು ಸೇರುವುದು ಸರಿಯಲ್ಲ ಮತ್ತು ಅಪಾಯಕಾರಿಯೂ ಹೌದು, ಆದುದರಿಂದ ಜನತಾ ನ್ಯಾಯಾಲಯದಲ್ಲಿ ಜನರು ಗುಂಪು ಸೇರುವುದು ಕಡ್ಡಾಯವಾಗಿರದೆ, ಪ್ರಕರಣಗಳನ್ನು ಪರ್ಯಾಯವಾದ ಅಂದರೆ ಅಷ್ಟೇ ಪರಿಣಾಮಕಾರಿಯಾದ ವಿಧಾನದಲ್ಲಿ, ಸಂಧಾನದ ಮೂಲಕ ಇತ್ಯರ್ಥಗೊಳಿಸುವುದನ್ನು ಕಂಡುಕೊಳ್ಳುವುದು/ಅನುಸರಿಸುವುದು ತೀರಾ ಅಗತ್ಯವಾಗಿದೆ ಎಂದು ಹೇಳಿದರು.

ರಾಜ್ಯ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಪೋಷಕರು ಆದ ನ್ಯಾಯಮೂರ್ತಿ ಅಭಯ ಶ್ರೀನಿವಾಸ ಓಕ್ ಅವರು ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾದ ನ್ಯಾಯಮೂರ್ತಿ ಅರವಿಂದ ಕುಮಾರ್ ಅವರು ಉಚ್ಚನ್ಯಾಯಾಲಯದ ನ್ಯಾಯಾಧೀಶರು ಹಾಗೂ ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷ ನ್ಯಾಯಮೂರ್ತಿ ಅಲೋಕ್ ಅರಾಧೆ ಅವರು ಮೆಗಾ ಲೋಕ್ ಅದಾಲತ್‌ನಲ್ಲಿ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಿರುವ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದು, ಈ ಸಂಬಂಧ ಮೆಗಾ ಲೋಕ್ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸಂಪೂರ್ಣ ಸಹಕಾರ ನೀಡಿರುವ ನ್ಯಾಯಾಂಗ ಅಧಿಕಾರಿಗಳು, ವಕೀಲರು, ಕಕ್ಷಿದಾರರು,

ವಿಮಾ ಕಂಪನಿಯ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು, ಸರ್ಕಾರದ ವಿವಿಧ ಇಲಾಖೆಯ ಮುಖ್ಯಸ್ಥರು ಹಾಗೂ ಅಧಿಕಾರಿಗಳಿಗೆ ಧನ್ಯವಾದಗಳನ್ನು ಸಲ್ಲಿಸಿದರು.

## ವಸತಿ ಸಚಿವರ ಪ್ರವಾಸ

**ಬೆಂಗಳೂರು, ಡಿಸೆಂಬರ್ 21 (ಕರ್ನಾಟಕ ವಾರ್ತೆ):**

ವಸತಿ ಸಚಿವ ವಿ. ಸೋಮಣ್ಣ ಅವರು ಡಿಸೆಂಬರ್ 25 ರಂದು ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಆನ್‌ಲೈನ್ ಮುಖಾಂತರ ವಂತಿಕೆ ಪಾವತಿಸಲು ಸೂಚನೆ

**ಬೆಂಗಳೂರು, ಡಿಸೆಂಬರ್ 21 (ಕರ್ನಾಟಕ ವಾರ್ತೆ):**

ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಖಾನೆಗಳು, ಪ್ಲಾಂಟೇಶನ್‌ಗಳು, ಮೋಟಾರು ವಾಹನ ಸಂಸ್ಥೆಗಳು ಹಾಗೂ 50 ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು/ITBT ಸಂಸ್ಥೆಗಳು, ಚಾರಿಟಬಲ್ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಕರ್ನಾಟಕ ಸೊಸೈಟಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾಗಿರುವ ಸಂಘಗಳು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ವಂತಿಕೆ ಪಾವತಿಸ ಬೇಕಾಗಿರುತ್ತದೆ.

ಈ ಕುರಿತು ಕರ್ನಾಟಕ ರಾಜ್ಯದ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಗೊಳಿಸಲಾಗಿದೆ. ಈ ತಿದ್ದುಪಡಿ ಕಾಯ್ದೆಯನ್ನು ಮೂಲ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ಸೆಕ್ಷನ್ 7ಎ ಗೆ ಸೇರಿಸಲಾಗಿದೆ. ಆದ್ದರಿಂದ ಕಾರ್ಮಿಕರು ರೂ.20/- ಮಾಲೀಕರು ರೂ.40/- ರಂತೆ ಒಟ್ಟು ರೂ 60/- ರಂತೆ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಗೆ ಪಾವತಿಸುವುದು ಕಡ್ಡಾಯವಾಗಿರುತ್ತದೆ.

ಈ ಕಾಯ್ದೆಯಡಿಯಲ್ಲಿ ಆನ್‌ಲೈನ್ ಮುಖಾಂತರ ವಂತಿಗೆ ಪಾವತಿಸಬೇಕಾದ ವೆಬ್‌ಸೈಟ್ ವಿಳಾಸ www.klwb.karnataka.gov.in ವಂತಿಗೆ ಪಾವತಿಗೆ ಕಡೆಯ ದಿನಾಂಕ: 15-01-2021 (2020 ನೇ ಕ್ಯಾಲೆಂಡರ್ ವರ್ಷಕ್ಕೆ) ನಿಯಮ ಪಾಲಿಸದ ಸಂಸ್ಥೆಗಳಿಗೆ ಮೊದಲ 3 ತಿಂಗಳಿಗೆ ಶೇಕಡ 12% ರಂತೆ ಹಾಗೂ ನಂತರದ ತಿಂಗಳಿಗೆ ಶೇಕಡ 18% ಬಡ್ಡಿಯನ್ನು ದಂಡವಾಗಿ ವಿಧಿಸಬಹುದು, ಹಾಗು ಕಲ್ಯಾಣ ಆಯುಕ್ತರಿಂದ ತಪಾಸಣೆ/ತನಿಖೆಗೆ ಒಳಪಡಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8277291175, 8277120505, 080-23475188 ಮೂಲಕ ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಉತ್ತೀರ್ಣತಾ ಪ್ರಮಾಣ ಪತ್ರ ಪಡೆಯಲು ಸೂಚನೆ

ಬೆಂಗಳೂರು, ಡಿಸೆಂಬರ್ 21 (ಕರ್ನಾಟಕ ವಾರ್ತೆ):

2020 ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣತೆ ಹೊಂದಿರುವ ಅಭ್ಯರ್ಥಿಗಳು ಉತ್ತೀರ್ಣತಾ ಪ್ರಮಾಣ ಪತ್ರಗಳನ್ನು ಆಯೋಗದ ವೆಬ್‌ಸೈಟ್ ಮುಖಾಂತರ ಡಿಜಿಲಾಕರ್ ಅಕೌಂಟ್‌ನೊಂದಿಗೆ ಆಧಾರ್ ಸಂಖ್ಯೆಯನ್ನು ಜೋಡಿಸಿ ನಂತರ ನಿಮ್ಮ ನೋಂದಣಿ ಸಂಖ್ಯೆ (7 ಅಂಕಿಗಳು) ಯನ್ನು **Username** ಆಗಿ ಉಪಯೋಗಿಸಿ ಪ್ರಮಾಣಪತ್ರಗಳನ್ನು ಲಾಗಿನ್ ಆದ 3 ರಿಂದ 4 ಗಂಟೆಯೊಳಗಾಗಿ ಪಡೆಯಬಹುದಾಗಿದೆ.

ಪ್ರಮಾಣ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವ ಹಂತದಲ್ಲಿ ತಾಂತ್ರಿಕ ದೋಷ ಉಂಟಾದಲ್ಲಿ ಸೇವಾಸಿಂಧು ಸಹಾಯವಾಣಿ ಸಂಖ್ಯೆಗಳು 080–22279954, 8088304855 ಮತ್ತು 6361799796 ನ್ನು ಸಂಪರ್ಕಿಸಲು ಅಧಿಕೃತ ಪ್ರಟಕಣೆ ತಿಳಿಸಿದೆ.

## ಡಿಸೆಂಬರ್ 22 ರಂದು ಸಾರ್ವಜನಿಕರ ವೀಕ್ಷಣೆಗೆ ಮೈಸೂರು ಮೃಗಾಲಯ

ಬೆಂಗಳೂರು, ಡಿಸೆಂಬರ್ 21 (ಕರ್ನಾಟಕ ವಾರ್ತೆ):

ಕ್ರಿಸ್ಮಸ್ ಪ್ರಯುಕ್ತ ಪ್ರವಾಸಿಗರು, ಜನಸಾಮಾನ್ಯರು ಹಾಗೂ ಸ್ಥಳೀಯರಿಗೆ ಮೈಸೂರು ನಗರದ ಶ್ರೀ ಜಯಚಾಮರಾಜೇಂದ್ರ ಮೃಗಾಲಯ ವೀಕ್ಷಿಸಲು ಅನುವಾಗುವಂತೆ ದಿನಾಂಕ 22–12–2020 ರ ಮಂಗಳವಾರದಂದು ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಪ್ರಕೃತಿ ಉದ್ಯಾನವನ್ನು ಸಾರ್ವಜನಿಕರ ವೀಕ್ಷಣೆಗೆ ತೆರೆಯಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Remit contributions online

**Bengaluru, December 21 (Karnataka Information)**

It is mandatory for the below mentioned establishments to remit contributions as per the Karnataka Labour Welfare Fund, Act 1965. Compulsory contributions has to be paid by all factories, plantations, workshops, motor, omnibus services and shops and commercial establishments/ITBT firms employing more than 50 workers, charitable trusts, societies registered under Karnataka Societies Registration Act, 1960, etc.

Factory/Establishment will pay contribution at the ratio of **Rs. 20:40** (Employees Rs. 20/ Employers Rs. 40) & to be remitted through online only. Labour welfare fund payment for online www.klwb.karnataka.gov.in

**LAST DATE TO PAY CONTRIBUTION: 15-01-2021 (CALENDER YEAR 2020)** Delay in payment of Contributions will attract penal interest at the rate of 12% for 1st 3 months and after 3 months 18% on the amount due, and inspections by the Welfare Commissioner.For further clarification contact phone No. **8277291175, 8277120505, 080–23475188**

## Karnataka State Pollution Control Board
## ParisaraBhavan, Bengaluru
## AQI of the CAAQM stations established in Bengaluru City
## Date :21.12.2020

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 143 | Moderate | $PM_{2.5}$ |
| 2 | Jayanagar 5th Block, Shalini ground | 156 | Moderate | $PM_{2.5}$ |
| 3 | KAVIKA, Mysore Road | 126 | Moderate | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 93 | Satisfactory | $PM_{10}$ |
| 5 | HSR Layout, near Central Silkboard | 124 | Moderate | $PM_{2.5}$ |
| 6 | City Railway Station, Magestic, Bengaluru | 62 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 24 | Good | CO |

| | | | | |
|---|---|---|---|---|
| 8 | BWSSB, Kadabesanahalli | 126 | Moderate | $PM_{2.5}$ |
| 9 | Peenya | 92 | Satisfactory | $O_3$ |
| 10 | BTM Layout | 155 | Moderate | $O_3$ |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

**ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**

**ಪರಿಸರ ಭವನ, ಬೆಂಗಳೂರು.**

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಠಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 21.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 143 | ಸಾಧಾರಣ | $PM_{2.5}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 156 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 126 | ಸಾಧಾರಣ | $PM_{2.5}$ |

| | | | | |
|---|---|---|---|---|
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 93 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, [illegible] | 124 | ಸಾಧಾರಣ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 62 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 24 | ಉತ್ತಮ | CO |
| 8 | BWSSB, ಕಾಡಬೀಸನಹಳ್ಳಿ | 126 | ಸಾಧಾರಣ | $PM_{2.5}$ |
| 9 | ಪೀಣ್ಯ | 92 | ತೃಪ್ತಿಕರ | $O_3$ |
| 10 | ಬಿಟಿಎಂ ಲೇಔಟ್ | 155 | ಸಾಧಾರಣ | $O_3$ |

| **ವರ್ಗ(ಶ್ರೇಣಿ)** | **ಉಂಟಾಗಬಹುದಾದಆರೋಗ್ಯ ಪರಿಣಾಮಗಳು** |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |